Off) +91(0821)2526301-353
(Fax) +91(0821) 2330166,
mail: ceo_zp_mys@nic.in
ceomys@kar.nic.in

**ಜಿಲ್ಲಾ ಪಂಚಾಯತ್, ಮೈಸೂರು**
**ZILLA PANCHAYAT, MYSURU**

ಸಂಖ್ಯೆ : ಇಎಸ್‌ಟಿ(4)/ಗ್ರಂಥಾಲಯ 14/2014-15 ದಿನಾಂಕ : 30/12/2014

# ಸುತ್ತೋಲೆ

**ವಿಷಯ:** ಜಿಲ್ಲೆಯ ಎಲ್ಲಾ ಸರ್ಕಾರಿ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಸಾರ್ವಜನಿಕ ಗ್ರಂಥಾಲಯಗಳಲ್ಲಿ ಕಡ್ಡಾಯವಾಗಿ ಸದಸ್ಯತ್ವವನ್ನು ಹೊಂದುವ ಬಗ್ಗೆ.

**ಉಲ್ಲೇಖ:** ಉಪನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಮೈಸೂರು ಇವರ ಪತ್ರ ಸಂಖ್ಯೆ : ಜಿಕೇ.ಗ್ರಂ.ಮೈ/ತಾಂ.ವಿ/ಇತರೆ/2013-14 ದಿನಾಂಕ : 12/12/2014

* * *

ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ ಸರ್ಕಾರಿ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿಗಳಲ್ಲಿ ಓದುವ ಹವ್ಯಾಸವನ್ನು ಉತ್ತೇಜಿಸಲು ಮತ್ತು ಪುಸ್ತಕ ಸಂಸ್ಕೃತಿಯನ್ನು ಬೆಳಸುವ ಸಲುವಾಗಿ ಸಾರ್ವಜನಿಕ ಗ್ರಂಥಾಲಯಗಳಲ್ಲಿ ಕಡ್ಡಾಯವಾಗಿ ಸದಸ್ಯತ್ವವನ್ನು ಹೊಂದುವ ಬಗ್ಗೆ ದಿನಾಂಕ : 11/12/2014 ರಂದು ಜರುಗಿದ ಜಿಲ್ಲಾ ಪಂಚಾಯತ್ ಮಾಸಿಕ ಕೆ.ಡಿ.ಪಿ ಸಭೆಯಲ್ಲಿ ಚರ್ಚೆಯಾಗಿದ್ದು, ಈ ಬಗ್ಗೆ ಉಲ್ಲೇಖಿತ ಪತ್ರದಲ್ಲಿ ಉಪನಿರ್ದೇಶಕರು, ಜಿಲ್ಲಾ ಕೇಂದ್ರ ಗ್ರಂಥಾಲಯ, ಮೈಸೂರುರವರು ಪ್ರಸ್ತಾಪಿಸಿರುತ್ತಾರೆ.

ಜಿಲ್ಲೆಯ ಎಲ್ಲಾ ಸರ್ಕಾರಿ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ತಮ್ಮ ಕಚೇರಿ/ನಿವಾಸದ ಸಮೀಪವಿರುವ ಸಾರ್ವಜನಿಕ ಗ್ರಂಥಾಲಯಗಳಲ್ಲಿ ದಿನಾಂಕ : 30/01/2015 ರೊಳಗೆ ಕಡ್ಡಾಯವಾಗಿ ಸದಸ್ಯತ್ವ ಹೊಂದಲು ತಿಳಿಸಿದೆ. ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಈ ಬಗ್ಗೆ ತಮ್ಮ ವ್ಯಾಪ್ತಿಯ ಅಧೀನ ಕಚೇರಿಗಳಿಗೆ ಸೂಕ್ತ ನಿರ್ದೇಶನ ನೀಡಲು ತಿಳಿಸಿದೆ.

ಮುಂದುವರೆದು, ವಿವಿಧ ಇಲಾಖೆಗಳ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಘ ಸಂಸ್ಥೆಗಳ (ಸ್ತ್ರೀಶಕ್ತಿ, ಯುವಕ/ಯುವತಿ ಮಂಡಳಿ, ಇತ್ಯಾದಿ) ಸದಸ್ಯರುಗಳು, ವಿವಿಧ ಇಲಾಖೆಗಳಿಂದ ಸರ್ಕಾರಿ ಸವಲತ್ತುಗಳನ್ನು ಪಡೆಯುವ ಸಾಕ್ಷರ ಫಲಾನುಭವಿಗಳು ಸಾರ್ವಜನಿಕ ಗ್ರಂಥಾಲಯಗಳಲ್ಲಿ ಸದಸ್ಯತ್ವ ಹೊಂದಲು ಸಂಬಂಧಿಸಿದ ಅಧಿಕಾರಿಗಳು ಸೂಕ್ತ ನಿರ್ದೇಶನ/ವ್ಯವಸ್ಥೆ ಮಾಡಲು ತಿಳಿಸಿದೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,
ಜಿಲ್ಲಾ ಪಂಚಾಯತ್, ಮೈಸೂರು

**ಪ್ರತಿಯನ್ನು,**

1. ಮಾನ್ಯ ಅಧ್ಯಕ್ಷರು/ಉಪಾಧ್ಯಕ್ಷರ ಆಪ್ತಶಾಖೆ, ಜಿಲ್ಲಾ ಪಂಚಾಯತ್, ಮೈಸೂರುರವರಿಗೆ ಮಾಹಿತಿಗಾಗಿ.
2. ಮಾನ್ಯ ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರುರವರಿಗೆ ಮಾಹಿತಿಗಾಗಿ.
3. ಮಾನ್ಯ ಜಿಲ್ಲಾಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರುರವರಿಗೆ ಮಾಹಿತಿಗಾಗಿ.
4. ಜಿಲ್ಲಾ ಪಂಚಾಯತ್ ಕಚೇರಿಯ ಎಲ್ಲಾ ಅಧಿಕಾರಿಗಳಿಗೆ ಹಾಗು ಸಿಬ್ಬಂದಿಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
5. ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಹಾಗು ಅವರ ಮೂಲಕ ಅವರ ವ್ಯಾಪ್ತಿಯ ಅಧೀನ ಕಚೇರಿ ಅಧಿಕಾರಿಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
6. ಜಿಲ್ಲೆಯ ಎಲ್ಲಾ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಹಾಗು ಅವರ ಮೂಲಕ ಎಲ್ಲಾ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಮುಂದಿನ ಸೂಕ್ತಕ್ರಮಕ್ಕಾಗಿ.
7. ಕಚೇರಿ ಪ್ರತಿ.